ನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
ATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷ JECT:

ಪತ್ರಿಕೆಯ ಹೆಸರು APER: ದಿನಾಂಕ : DATE : 31/08/2019

# ಸರ್ಕಾರಿ ಉದ್ಯೋಗಿಗಳಿಗೆ ಎಚ್ಚರಿಕೆ

31-8-19

ಸಂ.ಕ ಸಮಾಚಾರ ಬೆಂಗಳೂರು

ಸರ್ಕಾರಿ ಉದ್ಯೋಗಿಗಳು ಬೆಳಗ್ಗೆ 10ರಿಂದ ಸಂಜೆ 5.30ರವರೆಗೂ ಕಡ್ಡಾಯವಾಗಿ ಕಚೇರಿಯಲ್ಲಿ ಇರಬೇಕೆಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಕೆಲಸಕ್ಕೆ ತಡವಾಗಿ ಬರುವುದು, ಕಚೇರಿಯಲ್ಲಿ ಇಲ್ಲದಿರುವ ಸಂಗತಿಗಳಿಂದಾಗಿ ಸಾರ್ವಜನಿಕವಾಗಿ ಸಾಕಷ್ಟು ದೂರುಗಳು ಬಂದಿವೆ.

ಈ ಹಿನ್ನೆಲೆಯಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 5.30ರವರೆಗೂ ಉದ್ಯೋಗಿಗಳು ಕಚೇರಿಯಲ್ಲಿ ಕಡ್ಡಾಯವಾಗಿ ಹಾಜರು ಇರಬೇಕು.

ಕಚೇರಿಯಲ್ಲಿ ಹಾಜರ್ ಇರದ ನೌಕರರ ವಿರುದ್ಧ ಶಿಸ್ತುಕ್ರಮ ಜರುಗಿಸುವಂತೆ ಸೂಚಿಸಿ ರಾಜ್ಯ ಸರ್ಕಾರ ಎಲ್ಲ ಇಲಾಖೆಗಳ ಮುಖ್ಯಸ್ಥರಿಗೆ ಆದೇಶ ಹೊರಡಿಸಿದೆ.

ಯಡಿಯೂರಪ್ಪ ಮುಖ್ಯಮಂತ್ರಿಯಾದ ನಂತರ ಹಲವಾರು ಕಚೇರಿಗಳಿಗೆ ಭೇಟಿ ನೀಡಿದ್ದರು.

ಈ ಸಂದರ್ಭದಲ್ಲಿ ಕಂಡುಬಂದಿರುವ ಅವ್ಯವಸ್ಥೆ ಗಮನಿಸಿ ಆಡಳಿತದಲ್ಲಿ ಶಿಸ್ತು ತರುವ ನಿಟ್ಟಿನಲ್ಲಿ ಯಡಿಯೂರಪ್ಪ ಅವರ ಸೂಚನೆ ಆಧರಿಸಿ ಈ ಆದೇಶ ಹೊರಡಿಸಲಾಗಿದೆ ಎಂದು ತಿಳಿಸಲಾಗಿದೆ.